ಕರ್ನಾಟಕ ಸರ್ಕಾರ
ವಾರ್ತಾ ಹಾಗೂ ಸಾರ್ವಜನಿಕ ಸಂಪರ್ಕ ಇಲಾಖೆ
ನಂ.17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ ಬೆಂಗಳೂರು 560 001. ದೂ. 080-22028032/34/ಫ್ಯಾಕ್ಸ್ 22028041

ದಿನಾಂಕ: 31-01-2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | 2013 ನೇ ಸಾಲಿನ 'ವಿವಿಧ ಪ್ರಶಸ್ತಿ' ಗಳ ಪ್ರದಾನ ಸಮಾರಂಭ.<br>ಪ್ರಶಸ್ತಿ ಪ್ರದಾನ:<br>ಶ್ರೀ ಸಿದ್ಧರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ,<br>ಶ್ರೀಮತಿ ಉಮಾಶ್ರೀ, ಕನ್ನಡ ಮತ್ತು ಸಂಸ್ಕೃತಿ ಖಾತೆ ಸಚಿವರು | 01-02-2015<br>ಭಾನುವಾರ<br>ಸಂಜೆ<br>6-00 ಗಂಟೆಗೆ | ಸಂಸ ಬಯಲು ಮಂದಿರ,<br>ಜೆ.ಸಿ. ರಸ್ತೆ,<br>ಬೆಂಗಳೂರು – 560 002 |
| 2. | ಪತ್ರಿಕಾಗೋಷ್ಠಿ.<br>ಶ್ರೀ ಎಸ್. ಆರ್. ಸೋಮಶೇಖರ್, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು.<br><br>ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ನವದೆಹಲಿ ಹಾಗೂ ಕರ್ನಾಟಕ ರಾಜ್ಯ | 02-02-2015<br>ಸೋಮವಾರ<br>ಮಧ್ಯಾಹ್ನ<br>2-15 ಗಂಟೆಗೆ | ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರ ಕೊಠಡಿ, ನೆಲಮಹಡಿ, ನಗರ ಸಿವಿಲ್ ನ್ಯಾಯಾಲಯ ಆವರಣ ಬೆಂಗಳೂರು |

| | | | |
|---|---|---|---|
| | ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ಮಾಸಿಕ ರಾಷ್ಟ್ರೀಯ ಲೋಕ ಅದಾಲತ್ ಕುರಿತಂತೆ | | |

ನಿರ್ದೇಶಕರ ಪರವಾಗಿ

# ಪತ್ರಿಕಾ ಪ್ರಕಟಣೆ

## ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ

ಬೆಂಗಳೂರು, ಜನವರಿ 31 (ಕರ್ನಾಟಕ ವಾರ್ತೆ)

2014-15 ನೇ ಶೈಕ್ಷಣಿಕ ಸಾಲಿನ ಕೇಂದ್ರ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯದಡಿಯಲ್ಲಿನ ಅಂಗವಿಕಲ ವ್ಯಕ್ತಿಗಳ ಸಬಲೀಕರಣ ಇಲಾಖೆಯಿಂದ ವಿಕಲಚೇತನ ವಿದ್ಯಾರ್ಥಿಗಳಿಗೆ **Pre Metric** ಹಾಗೂ **Post Metric** ವಿದ್ಯಾರ್ಥಿ ವೇತನವನ್ನು ನೀಡಲಾಗುತ್ತಿದೆ.

ಈ ಸಂಬಂಧ ಶಾಲಾ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿಗಳು ತಮ್ಮ ಜಿಲ್ಲೆಯಲ್ಲಿನ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು, ಉಪ ನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರನ್ನು ಕೂಡಲೇ ಸಂಪರ್ಕಿಸಿ ಈ ಯೋಜನೆಯ ಉಪಯೋಗವನ್ನು ಪಡೆದುಕೊಳ್ಳಲು ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ **Ministry of Social Justice & Empowerment, Government of India website** ನ್ನು ಬಳಸಿಕೊಳ್ಳಲು ತಿಳಿಸಿದೆ.
ಪಹೊ:ಬಾಬು:ಜಿಪಿಆರ್.

## ಫೆಬ್ರವರಿ 2 ರಿಂದ ವಿಧಾನಸಭೆ ಅಧಿವೇಶನ

– ವಿಧಾನಸಭಾಧ್ಯಕ್ಷ ಶ್ರೀ ಕಾಗೋಡು ತಿಮ್ಮಪ್ಪ

ಬೆಂಗಳೂರು, ಜನವರಿ 31 (ಕರ್ನಾಟಕ ವಾರ್ತೆ)

ಹದಿನಾಲ್ಕನೇ ವಿಧಾನಸಭೆಯ ಅಧಿವೇಶನವು ಫೆಬ್ರವರಿ 2 ರಿಂದ ಫೆಬ್ರವರಿ 13 ರವರೆಗೆ ವಿಧಾನಸೌಧದಲ್ಲಿರುವ ವಿಧಾನಸಭಾ ಸಭಾಂಗಣದಲ್ಲಿ ಒಟ್ಟು 10 ದಿನಗಳ ಕಾಲ ಸಮಾವೇಶಗೊಳ್ಳಲಿದೆ ಎಂದು ರಾಜ್ಯ ವಿಧಾನಸಭೆ ಅಧ್ಯಕ್ಷ ಶ್ರೀ ಕಾಗೋಡು ತಿಮ್ಮಪ್ಪ ಅವರು ಇಂದು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ದಿನಾಂಕ 2-02-2015 ರಂದು ಮಧ್ಯಾಹ್ನ 12-00 ಗಂಟೆಗೆ ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಉಭಯ ಸದನಗಳ ಸದಸ್ಯರುಗಳನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ನಂತರ ಸದನವು ಸೇರಿ ಕೆಲವು ಔಪಚಾರಿಕ ಕಾರ್ಯಕಲಾಪಗಳನ್ನು ನಡೆಸಿ ನಂತರ ಮುಂದೂಡಲಾಗುವುದು.

ಅಗಲಿದ ಗಣ್ಯರುಗಳಿಗೆ ದಿನಾಂಕ 3-02-2015 ರಂದು ಸಂತಾಪ ಸೂಚನಾ ನಿರ್ಣಯವನ್ನು ಮಂಡಿಸಿ ಪ್ರಶ್ನೋತ್ತರ, ರಾಜ್ಯಪಾಲರ ಭಾಷಣದ ವಂದನಾ ನಿರ್ಣಯದ ಮೇಲೆ ಚರ್ಚೆ ಹಾಗೂ ಇತರೆ ಕಾರ್ಯಕಲಾಪಗಳನ್ನು ನಡೆಸಲಾಗುವುದು. ದಿನಾಂಕ: 4-02-2015 ರಿಂದ 13-02-2015 ರವರೆಗಿನ ಕಾರ್ಯಕಲಾಪ ದಿನಗಳಲ್ಲಿ ರಾಜ್ಯಪಾಲರ ಭಾಷಣದ ಮೇಲಿನ ವಂದನಾ ನಿರ್ಣಯದ ಮೇಲೆ ಚರ್ಚೆ ಹಾಗೂ ನಿರ್ಣಯದ ಅಂಗೀಕಾರ, ಪ್ರಶ್ನೋತ್ತರ ಕಲಾಪ ಹಾಗೂ ಇನ್ನಿತರೆ ಸಾರ್ವಜನಿಕ ಮಹತ್ವದ ವಿಷಯಗಳ ಕುರಿತು ಚರ್ಚೆಗೆ ಅವಕಾಶ ನೀಡಲಾಗುವುದು ಎಂದು ಅವರು ಹೇಳಿದರು.

ಕರ್ನಾಟಕ ಶಿಕ್ಷಣ (ತಿದ್ದುಪಡಿ) ವಿಧೇಯಕ 2014 ಮಂಡನೆಗೆ ಬಾಕಿ ಇದೆ ಎಂದ ಅವರು ಕರ್ನಾಟಕ ಕಾಕಂಬಿ ನಿಯಂತ್ರಣ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2014, ಕರ್ನಾಟಕ ಸರೋವರ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2014 ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ವಿಧೇಯಕ, 2014, ಅಂಗೀಕಾರಕ್ಕೆ ಬಾಕಿ ಇದೆ ಎಂದು ತಿಳಿಸಿದರು.

ಈ ಅಧಿವೇಶನದಲ್ಲಿ ಪ್ರಸ್ತುತ ಈವರೆಗೆ ಸ್ವೀಕೃತವಾಗಿರುವ ಒಟ್ಟು 2256 ಪ್ರಶ್ನೆಗಳ ಪೈಕಿ ದಿನಾಂಕ : 30-01-2015 ರವರೆಗೆ 2181 ಪ್ರಶ್ನೆಗಳು ಅಂಗೀಕೃತವಾಗಿದೆ. ಇದುವರೆವಿಗೂ 5 ಬ್ಯಾಲೆಟ್‌ಗಳು ನಡೆದಿದ್ದು, ಆ ಪೈಕಿ 75 ಚುಕ್ಕೆ ಗುರುತಿನ ಪ್ರಶ್ನೆಗಳು ಮತ್ತು 2106 ಚುಕ್ಕೆ ರಹಿತ ಪ್ರಶ್ನೆಗಳಾಗಿರುತ್ತವೆ. 29 ಗಮನ ಸೆಳೆಯುವ ಸೂಚನೆಗಳು ಹಾಗೂ ನಿಯಮ 351 ರಡಿಯಲ್ಲಿ 22 ಸೂಚನೆಗಳನ್ನು ಸ್ವೀಕರಿಸಲಾಗಿದೆ. ಖಾಸಗಿ ಸದಸ್ಯರುಗಳ ನಿರ್ಣಯ ಹಾಗೂ ವಿಧೇಯಕಗಳಿಗೆ ಸಂಬಂಧಿಸಿದಂತೆ ಒಂದು ಸೂಚನೆಯನ್ನು ಸ್ವೀಕರಿಸಲಾಗಿದೆ ಎಂದು ಹೇಳಿದ ಸಭಾಧ್ಯಕ್ಷರು ಪ್ರಸಕ್ತ ಅಧಿವೇಶನದಲ್ಲಿ ಒಟ್ಟಾರೆಯಾಗಿ ಸಾರ್ವಜನಿಕ ಮಹತ್ವದ ಪ್ರಮುಖ ವಿಷಯಗಳು ಚರ್ಚೆಯಾಗಲಿದೆ ಎಂದು ತಿಳಿಸಿದರು.

ಪಹೊ:ಬಾಬು:ಜಿಪಿಆರ್.

## ಕರ್ನಾಟಕ – ಗೋವಾ ಎನ್.ಸಿ.ಸಿ. ತಂಡಕ್ಕೆ ಮೂರನೇ ಬಹುಮಾನ

**ಬೆಂಗಳೂರು, ಜನವರಿ 31 (ಕರ್ನಾಟಕ ವಾರ್ತೆ)**

ಜನವರಿ 26 ರಂದು ನವದೆಹಲಿಯಲ್ಲಿ ನಡೆದ 66 ನೇ ಗಣರಾಜ್ಯೋತ್ಸವ ಸಮಾರಂಭದ ಪಥಸಂಚಲನದಲ್ಲಿ ಕರ್ನಾಟಕ ಹಾಗೂ ಗೋವಾ ರಾಜ್ಯದಿಂದ ಪ್ರತಿನಿಧಿಸಿದ 105 ಎನ್.ಸಿ.ಸಿ. ತಂಡಕ್ಕೆ ಮೂರನೇ ಬಹುಮಾನ ದೊರೆತಿದೆ.

ಪ್ರಶಸ್ತಿ ಗೆದ್ದ ತಂಡವು ದಿನಾಂಕ 01-02-2015 ರಂದು ಬೆಳಿಗ್ಗೆ 6-20 ಗಂಟೆಗೆ ಕ್ರಾಂತಿ ಸಂಪರ್ಕ ಎಕ್ಸ್‌ಪ್ರೆಸ್ ರೈಲ್ವೆ ಮೂಲಕ ಯಶವಂತಪುರ ರೈಲ್ವೆ ನಿಲ್ದಾಣಕ್ಕೆ ಆಗಮಿಸಲಿದೆ.

ಪಹೊ:ಸೌಮ್ಯ:ಜಿಪಿಆರ್

## ರಾಜ್ಯದಲ್ಲಿ ಸಂಸತ್ ಆದರ್ಶ ಗ್ರಾಮ ಯೋಜನೆ ಜಾರಿಗೆ ಸಹಕಾರ

**ಬೆಂಗಳೂರು, ಜನವರಿ 31 (ಕರ್ನಾಟಕ ವಾರ್ತೆ)**

ಸಂಸತ್ ಆದರ್ಶ ಗ್ರಾಮ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಸರ್ಕಾರ ಎಲ್ಲಾ ರೀತಿಯ ಸಹಕಾರ ನೀಡಲಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಎಚ್.ಕೆ. ಪಾಟೀಲ್ ಅವರು ತಿಳಿಸಿದರು.

ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ಏರ್ಪಡಿಸಿದ್ದ ಸಂಸದರಿಗೆ ಮತ್ತು ಜಿಲ್ಲಾಧಿಕಾರಿಗಳಿಗೆ ಪರಿಚಯಾತ್ಮಕ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ನಂತರ ಪತ್ರಕರ್ತರೊಂದಿಗೆ ಮಾತನಾಡಿದ ಎಚ್.ಕೆ. ಪಾಟೀಲ್ ಅವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಜಾರಿಗೆ ತಂದಿರುವ 21 ಅಂಶಗಳ ಅಭಿವೃದ್ಧಿ ಯೋಜನೆಗಳನ್ನು ಸಂಸದರ ಆದರ್ಶ ಗ್ರಾಮ ಯೋಜನೆ ಅನುಷ್ಠಾನಗೊಳಿಸುವಾಗ ಅಳವಡಿಸಿಕೊಳ್ಳಲಾಗುವುದೆಂದರು.

ಸಂಸತ್ ಆದರ್ಶ ಗ್ರಾಮ ಯೋಜನೆಯನ್ನು ಜಾರಿಗೊಳಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸಬೇಕು ಎಂದ ಸಚಿವರು ಕಳೆದ 25 ವರ್ಷಗಳಿಂದ ರಾಜ್ಯ ಸರ್ಕಾರ ಹಲವಾರು ಯೋಜನೆಗಳ ಮೂಲಕ ಗ್ರಾಮೀಣಾಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಿ ಕೆಲಸ ಮಾಡುತ್ತಿದೆ ಎಂದರು.

ಸಂಸದರ ಆದರ್ಶ ಗ್ರಾಮ ಯೋಜನೆ ಅನುಷ್ಠಾನ ಯೋಜನೆಗೆ ವಿಶೇಷ ಅನುದಾನವನ್ನು ಪ್ರತ್ಯೇಕವಾಗಿ ಮೀಸಲಿಡಬೇಕೆಂಬುದು ಸಭೆಯಲ್ಲಿ ಪಾಲ್ಗೊಂಡ ಬಹುತೇಕ ಸಂಸದರ ಅಭಿಪ್ರಾಯವಾಗಿದೆ ಎಂದರು.

ರಾಷ್ಟ್ರದಲ್ಲಿ ಸಂಸದರ ಆದರ್ಶ ಗ್ರಾಮ ಯೋಜನೆ ಜಾರಿ ಬಗ್ಗೆ ಪ್ರಧಾನ ಮಂತ್ರಿಗಳು ವಿಶೇಷ ಒತ್ತು ನೀಡಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದ್ದಾರೆ ಎಂದ ಸಚಿವರು ನರೇಗಾ ಯೋಜನೆಯಡಿ ಕೇಂದ್ರದಿಂದ ರಾಜ್ಯಕ್ಕೆ ಬರಬೇಕಾದ ಹಣ ನೀಡುವಂತೆ ಕೇಂದ್ರದ ಗ್ರಾಮೀಣಾಭಿವೃದ್ಧಿ ಸಚಿವರಲ್ಲಿ ಮನವಿ ಮಾಡಲಾಗಿದೆ ಎಂದರು.

ಸಭೆಯಲ್ಲಿ ರಾಜ್ಯದ ಸಂಸದರು, ಜಿಲ್ಲಾಧಿಕಾರಿಗಳು ಉಪಸ್ಥಿತರಿದ್ದರು.

**ಪಹೊ/ಕೆಪಿಪಿ/ಕೆಎಂ**

## ಫೆಬ್ರವರಿ 2 ರಿಂದ ವಿಧಾನ ಪರಿಷತ್ ಅಧಿವೇಶನ

**ಬೆಂಗಳೂರು, ಜನವರಿ 31 (ಕರ್ನಾಟಕ ವಾರ್ತೆ)**

ಕರ್ನಾಟಕ ವಿಧಾನ ಪರಿಷತ್ತಿನ 127 ನೇ ಅಧಿವೇಶನವು ಫೆಬ್ರವರಿ 2 ರಿಂದ 13 ರ ವರೆಗೆ ಹತ್ತು ದಿನಗಳ ಕಾಲ ನಡೆಯಲಿದೆ ಎಂದು ವಿಧಾನ ಪರಿಷತ್ತಿನ ಸಭಾಪತಿಗಳಾದ ಶ್ರೀ ಡಿ.ಎಚ್. ಶಂಕರಮೂರ್ತಿ ಅವರು ತಿಳಿಸಿದರು.

ಫೆಬ್ರವರಿ 2 ರಂದು ಮಧ್ಯಾಹ್ನ 12-00 ಗಂಟೆಗೆ ಉಭಯ ಸದನಗಳನ್ನುದ್ದೇಶಿಸಿ ಘನತೆವೆತ್ತ ರಾಜ್ಯಪಾಲರು ಭಾಷಣ ಮಾಡಲಿದ್ದಾರೆಂದು ತಿಳಿಸಿದರು. ಈವರೆಗೆ ಸದಸ್ಯರಿಂದ 783 ಪ್ರಶ್ನೆಗಳು ಬಂದಿದ್ದು ಆ ಪೈಕಿ 638 ಚುಕ್ಕೆ ಗುರುತಿನ ಪ್ರಶ್ನೆಗಳಾಗಿವೆ. ಉಳಿದ 145 ಪ್ರಶ್ನೆಗಳು ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಾಗಿದ್ದು 61 ಗಮನ ಸೆಳೆಯುವ ಸೂಚನೆಗಳು ಬಂದಿವೆ ಎಂದರು.

**ಪಹೊ/ಕೆಪಿಪಿ/ಕೆಎಂ**

# ಪ್ರವಾಸ

ಬೆಂಗಳೂರು, ಜನವರಿ 31 (ಕರ್ನಾಟಕ ವಾರ್ತೆ)

ಕರ್ನಾಟಕ ವಿಧಾನ ಸಭೆಯ ಸರ್ಕಾರಿ ಮುಖ್ಯ ಸಚೇತಕ ಶ್ರೀ ಅಶೋಕ್ ಮಹಾದೇವಪ್ಪ ಪಟ್ಟಣ್, (ಶ್ರೀ ಪಿ.ಎಂ. ಅಶೋಕ್) ಅವರು ಫೆಬ್ರವರಿ 1 ರಂದು ಬೆಳಗಾವಿ, ಹುಬ್ಬಳ್ಳಿ, ಧಾರವಾಡ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳುವರು. ಅಂದು ಮಧ್ಯಾಹ್ನ 3.00 ಗಂಟೆಗೆ ಕೆ.ಚಂದರಗಿಯಲ್ಲಿ ಕೃಷಿ ಸಚಿವರೊಂದಿಗೆ "ಕೃಷಿ ಭಾಗ್ಯ" ಕಾರ್ಯಕ್ರಮದಲ್ಲಿ ಭಾಗವಹಿಸುವ ಅವರು ರೈತರೊಂದಿಗೆ ಸಂವಾದದಲ್ಲಿ ಪಾಲ್ಗೊಳ್ಳುವರು. ದಿನಾಂಕ 2/2/2015 ರಂದು ಬೆಂಗಳೂರಿಗೆ ಹಿಂದಿರುಗುವರು.

ಪಹೊ/ಕೆಎಂ

ಛಾಯಾಚಿತ್ರ ಶೀರ್ಷಿಕೆ:

ಫೆಬ್ರವರಿ 2 ರಿಂದ ನಡೆಯುವ ರಾಜ್ಯ ವಿಧಾನ ಸಭೆಯ ಅಧಿವೇಶನ ಕುರಿತಂತೆ ಕರ್ನಾಟಕ ವಿಧಾನ ಸಭಾಧ್ಯಕ್ಷ ಶ್ರೀ ಕಾಗೋಡು ತಿಮ್ಮಪ್ಪ ಅವರು ಪತ್ರಿಕಾಗೋಷ್ಠಿಯಲ್ಲಿ ವಿವರಗಳನ್ನು ನಿಡಿದರು. ಚಿತ್ರದಲ್ಲಿ ವಿಧಾನ ಸಭೆಯ ಕಾರ್ಯದರ್ಶಿ ಶ್ರೀ ಓಂಪ್ರಕಾಶ್ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.
ಬಾಬು/ಕೆಎಂ